# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳಿಗೆ ಗುರುತಿನ ಚೀಟಿಯನ್ನು ವಿತರಿಸುವ ಬಗ್ಗೆ.

**ಓದಲಾಗಿದೆ**: ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರ ಏಕ ಕಡತ ಸಂಖ್ಯೆ: KSCSK/ MS13/ MSRE/3/2023-Sec-KSCSK(Computer No. 1156948.

*****

**ಪ್ರಸ್ತಾವನೆ:-**

ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013ರ ಕಾಯ್ದೆ ಹಾಗೂ ನಿಯಮಗಳ ಅನ್ವಯ ಜಿಲ್ಲಾ ಸಮೀಕ್ಷಾ ಸಮಿತಿಯಲ್ಲಿ ಅನುಮೋದಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪಟ್ಟಿಯನ್ನು ನಗರಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಂಬಂಧಪಟ್ಟ ಮುಖ್ಯಸ್ಥರು ಧೃಢೀಕರಿಸಿ, ರಾಜ್ಯ ಸರ್ವೆ ಸಮಿತಿಯಲ್ಲಿ ಮಂಡಿಸಿ ರಾಜ್ಯದಲ್ಲಿ 7483 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪಟ್ಟಿಯನ್ನು ಅನುಮೋದಿಸಲಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಈಗಾಗಲೇ 2927 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳನ್ನು ಅನುಮೋದಿಸಿ ಒಂದು ಬಾರಿ ನಗದು ಸಹಾಯಧನ ವಿತರಿಸಿ (OTCA) ಮತ್ತು ಗುರುತಿನ ಸಂಖ್ಯೆಯನ್ನು ನೀಡಲಾಗಿದೆ. ಬಾಕಿ ಉಳಿದಿರುವ 4556 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಗುರುತಿನ ಸಂಖ್ಯೆ ನೀಡುವಂತೆ ಹಲವು ಬಾರಿ ಪತ್ರ ಮುಖೇನಾ ಹಾಗೂ ವಿಡಿಯೋ ಕಾನ್ಫರೆನ್ಸ್‌ಗಳಲ್ಲಿ ಇಲಾಖಾ ಮುಖ್ಯಸ್ಥರು ಕೇಂದ್ರ ಸರ್ಕಾರವನ್ನು ಕೋರಿರುತ್ತಾರೆ. ಆದರೆ ಕೇಂದ್ರ ಸರ್ಕಾರವು ಇನ್‌ಸ್ಯಾನಿಟರಿ ಲೆಟ್ರಿನ್‌ಗಳಲ್ಲಿ ಕೆಲಸ ಮಾಡುತ್ತಿರುವ ಇತ್ತೀಚಿನ ಭಾವಚಿತ್ರಗಳನ್ನು ಸ್ವಚ್ಛತಾ ಆಪ್‌ನಲ್ಲಿ ಅಪ್‌ಲೋಡ್ ಮಾಡಿದರೆ ಮಾತ್ರವೇ ಅನುಮೋದಿಸಿ ಗುರುತಿನ ಸಂಖ್ಯೆಯನ್ನು ನೀಡಲಾಗುವುದಾಗಿ ತಿಳಿಸಿರುತ್ತಾರೆ.

ಆದರೆ ಜಿಲ್ಲೆಗಳಲ್ಲಿ ಇನ್‌ಸ್ಯಾನಿಟರಿ ಲೆಟ್ರಿನ್‌ಗಳನ್ನು ಸ್ಯಾನಿಟರಿ ಲೆಟ್ರಿನ್‌ಗಳಾಗಿ ಮಾರ್ಪಡಿಸಿರುವ (ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಮುಕ್ತ ಜಿಲ್ಲೆ) ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಕೇಂದ್ರ ಸರ್ಕಾರಕ್ಕೆ ಧೃಡೀಕರಣ ನೀಡಿರುವ ಹಿನ್ನೆಲೆಯಲ್ಲಿ ಇತ್ತೀಚಿನ ಇನ್‌ಸ್ಯಾನಿಟರಿ ಲೆಟ್ರಿನ್‌ಗಳ ಚಿತ್ರಗಳನ್ನು ನೀಡಲಾಗುತ್ತಿಲ್ಲವೆಂದು ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಕೇಂದ್ರ ಸರ್ಕಾರದ ಅಧಿಕಾರಿಗಳೊಂದಿಗೆ ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ತಿಳಿಸಿರುತ್ತಾರೆ. ಆದರೆ ಸಮಾಜ ಕಲ್ಯಾಣ ಇಲಾಖೆಯು ಎಂ.ಎಸ್ ಕಾಯ್ದೆ 2013ರ ಅನುಷ್ಠಾನದ ಮೇಲ್ವಿಚಾರಣೆ ಮಾಡುವ ಪ್ರಾಧಿಕಾರವಾಗಿರುವುದರಿಂದ ಸಂಘ ಸಂಸ್ಥೆಗಳು, NGO ಗಳು ಆಯೋಗದ ಮುಂದೆ ಮತ್ತು ಸರ್ಕಾರದ ಕಛೇರಿ ಮುಂದೆ ಗುರುತಿನ ಚೀಟಿ ನೀಡಿದರೆ ಮಾತ್ರ ಪುನರ್ವಸತಿ ಕಲ್ಪಿಸಲು ಸಾಧ್ಯವಿರುವುದರಿಂದ ಗುರುತಿನ ಚೀಟಿಯನ್ನು ಶೀಘ್ರವಾಗಿ ನೀಡುವಂತೆ ಧರಣಿ ನಡೆಸುತ್ತಿರುತ್ತಾರೆ.

ರಾಜ್ಯ ಸಮೀಕ್ಷಾ ಸಮಿತಿಯಲ್ಲಿ ಅನುಮೋದನೆಗೊಂಡ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪೈಕಿ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು

S.V
14/09/2023

ಅಭಿವೃದ್ಧಿ ನಿಗಮ (NSKFDC) ದಿಂದ ಈಗಾಗಲೇ ಗುರುತಿನ ಸಂಖ್ಯೆ ಮತ್ತು ಒಂದು ಬಾರಿ ನಗದು ಸಹಾಯಧನ ಪಡೆದಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳನ್ನು ಹೊರತುಪಡಿಸಿ, ಬಾಕಿ ಉಳಿದಿರುವ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ರಾಜ್ಯ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯಿಂದ ಗುರುತಿನ ಸಂಖ್ಯೆಯನ್ನು ನೀಡಿ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಂದ ಗುರುತಿನ ಚೀಟಿಯನ್ನು ನಿಗಧಿತ ನಮೂನೆಯಲ್ಲಿ ವಿತರಿಸಲು ಆದೇಶ ಹೊರಡಿಸುವಂತೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ರವರು ಏಕ ಕಡತ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: SWD/SDC/222/2023,**
**ಬೆಂಗಳೂರು, ದಿನಾಂಕ:14-09-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ರಾಜ್ಯದಲ್ಲಿ ಗುರುತಿಸಲ್ಪಟ್ಟ 7483 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪೈಕಿ ಈಗಾಗಲೇ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಅಭಿವೃದ್ಧಿ ನಿಗಮದಿಂದ (NSKFDC) 2927 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಗುರುತಿನ ಸಂಖ್ಯೆ ವಿತರಿಸಿರುವವರನ್ನು ಹೊರತುಪಡಿಸಿ, ಬಾಕಿ ಉಳಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಗುರುತಿನ ಸಂಖ್ಯೆಯನ್ನು (ವಿವರ ಅನುಬಂಧ -1) ನೀಡಲಾಗಿದ್ದು, ಉಳಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಸಂಬಂಧಪಟ್ಟ ಇಲಾಖೆಗಳ ಕಛೇರಿಯಿಂದ ಕೆಳಕಂಡ ಷರತ್ತಿಗೊಳಪಡಿಸಿ (ಅನುಬಂಧ-2) ರ ಮಾದರಿಯಲ್ಲಿ ಸದರಿ ಗುರುತಿನ ಸಂಖ್ಯೆಯನ್ನು ನಮೂದಿಸಿ ಗುರುತಿನ ಚೀಟಿಯನ್ನು ವಿತರಿಸುವಂತೆ ಆದೇಶಿಸಿದೆ.

ಈ ಆದೇಶವನ್ನು ಸಮಾಜ ಕಲ್ಯಾಣ ಸಚಿವರ ಅನುಮೋದನೆಯ ಅನ್ವಯ ಹೊರಡಿಸಲಾಗಿದೆ.

**ಷರತ್ತುಗಳು:**

1. ಅನುಬಂಧ-1 ರಲ್ಲಿ ಅನುಮೋದಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗ ಇವರು ಗುರುತಿನ ಸಂಖ್ಯೆಯನ್ನು ನೀಡುವುದು.
2. ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಅಭಿವೃದ್ಧಿ ನಿಗಮದಿಂದ ನೀಡಿರುವ ಗುರುತಿನ ಸಂಖ್ಯೆ ಹಾಗೂ ಹೆಸರಿನಲ್ಲಿ ವ್ಯತ್ಯಾಸವಿದ್ದಲ್ಲಿ ಸರಿಪಡಿಸಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಧೃಡೀಕರಿಸತಕ್ಕದ್ದು (ಅನುಬಂಧ-1 ರಲ್ಲಿನ 68 ಜನ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು) ಲಗತ್ತಿಸಿದೆ.
3. ರಾಜ್ಯ ಸಮೀಕ್ಷಾ ಸಮಿತಿಯಲ್ಲಿ ಅನುಮೋದಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಂಖ್ಯೆಗೆ ಅನುಗುಣವಾಗಿ ಜಿಲ್ಲೆಯಲ್ಲಿ ಗುರುತಿನ ಚೀಟಿಯನ್ನು ವಿತರಿಸತಕ್ಕದ್ದು.
4. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದಿಂದ ಎಂ.ಎಸ್. ಕಾಯ್ದೆ 2013 ರ ಸೆಕ್ಷನ್ 13 ರ (1) (ಆ) ರಂತೆ ಒಂದು ಬಾರಿ ನಗದು (OTCA) ಸಹಾಯಧನವನ್ನು ನೀಡುವುದು.

S.V
14/09/2023

5. ಕೇಂದ್ರ ಸರ್ಕಾರದ ಅಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಕೆಲವು ಜಿಲ್ಲೆಯ ಜಿಲ್ಲಾಧಿಕಾರಿಗಳು ಈಗಾಗಲೇ ಸ್ವಚ್ಛತಾ ಆಪ್‌ನಲ್ಲಿ ಅಪ್‌ಲೋಡ್ ಮಾಡಿ ಕೈ ಬಿಟ್ಟಿರುವ (DISCARD) ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಹೆಸರನ್ನು ಮತ್ತು ಪಟ್ಟಿಯನ್ನು ಧೃಡೀಕರಿಸಿ ಅಪ್‌ಡೇಟ್ ಮಾಡುವುದು.
6. ಸಂಬಂಧಪಟ್ಟ ಇಲಾಖೆಗಳಿಂದ ವಿತರಿಸಿದ ಗುರುತಿನ ಚೀಟಿಯ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಪಟ್ಟಿ ಜಿಲ್ಲಾಧಿಕಾರಿಗಳಿಂದ ಧೃಡೀಕರಿಸಿದ ನಂತರ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಅಭಿವೃದ್ಧಿ ನಿಗಮದಿಂದ ಸೌಲಭ್ಯ ಪಡೆಯದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ರಾಜ್ಯ ಸರ್ಕಾರದಿಂದ ಪುನರ್ವಸತಿ ಸೌಲಭ್ಯಗಳನ್ನು ಕಲ್ಪಿಸಲಾಗುವುದು.
7. ರಾಜ್ಯದಿಂದ ಗುರುತಿನ ಸಂಖ್ಯೆಯನ್ನು ವಿತರಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಎಂ.ಎಸ್. ಕಾಯ್ದೆ 2013 ರನ್ವಯ ಸೆಕ್ಷನ್ 13 ಮತ್ತು 16 ರನ್ವಯ ಸಂಬಂಧಪಟ್ಟ ಇಲಾಖೆಗಳು ಪುನರ್ ವಸತಿ ಸೌಲಭ್ಯವನ್ನು ಕಲ್ಪಿಸುವುದು.
8. ವಿತರಣೆ ಮಾಡಿದ ಗುರುತಿನ ಚೀಟಿಯ ಪ್ರತಿಗಳನ್ನು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಮತ್ತು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮಕ್ಕೆ ನೀಡಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತುಅವರ ಹೆಸರಿನಲ್ಲಿ,

S.V
(ಕಲಾವತಿ ಎಸ್.ವಿ) 14/09/2023
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ :-**

1. ಮಹಾಲೇಖಪಾಲರು, ಲೆಕ್ಕ ಪತ್ರ: ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
5. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಮಂಡಳಿ, ಬೆಂಗಳೂರು.
8. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
12. ಎಲ್ಲಾ ಜಿಲ್ಲೆಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು,
13. ಆಯುಕ್ತರು, 10 ಮಹಾನಗರ ಪಾಲಿಕೆಗಳು ಮತ್ತು ನಗರಸಭೆ ಅಧಿಕಾರಿಗಳು.

14. ಮುಖ್ಯಾಧಿಕಾರಿ, ಎಲ್ಲಾ ಪುರಸಭೆ ಮತ್ತು ಪಟ್ಟಣ ಪಂಚಾಯತಿರವರಿಗೆ ಅಗತ್ಯ ಕ್ರಮಕ್ಕಾಗಿ
15. ಜಂಟಿ/ಉಪ ನಿರ್ದೇಶಕರು ಮತ್ತು ಸಹಾಯಕ ನಿರ್ದೇಶಕರು, ಗ್ರೇಡ್-1/2 ಸಮಾಜ ಕಲ್ಯಾಣ ಇಲಾಖೆರವರಿಗೆ ಅಗತ್ಯ ಕ್ರಮಕ್ಕಾಗಿ.
16. ಎಲ್ಲಾ ಜಿಲ್ಲೆಯ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳು (ಕ್ರ.ಸಂ 11 ರಿಂದ 16 ರವರೆಗೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರ ಮುಖಾಂತರ)
17. ಮುಖ್ಯ ಲೆಕ್ಕಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ, ಯವನಿಕ, ನೃಪತುಂಗ ರಸ್ತೆ, ಬೆಂಗಳೂರು.
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ :-**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಧಾನಸಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.

***

ಸರ್ಕಾರದ ಆದೇಶ ಸಂಖ್ಯೆ: SWD/SDC/222/2023, ದಿನಾಂಕ:13-09-2023.

## ಅನುಬಂಧ-1

| District | Totally Identified MS | NSKFDC MSID | Difference Not Identified by District Survey committee | Karnataka ID to be issued for Balance MSID |
|---|---|---|---|---|
| Bangalore Rural | 86 | 88 | 1 | 0 |
| Bangalore Urban | 125 | 127 | 0 | 8 |
| BBMP | 1625 | 180 | 0 | 1424 |
| Belgaum (or Belagavi) | 42 | 44 | 2 | 0 |
| Bellary | 10 | 10 | 0 | 0 |
| Bidar | 2 | 2 | 0 | 0 |
| Chamrajnagar | 319 | 0 | 0 | 319 |
| Chikkaballapura | 12 | 12 | 2 | 0 |
| Chikmagaluru | 2 | 0 | 0 | 2 |
| DAVANGERE | 402 | 397 | 0 | 0 |
| Hassan | 52 | 0 | 0 | 52 |
| Haveri | 78 | 62 | 6 | 22 |
| HUBLI(Dharwad) | 60 | 61 | 1 | 0 |
| KALBURGI | 213 | 224 | 11 | 0 |
| Kodagu | 63 | 0 | 0 | 63 |
| Kolar | 1224 | 500 | 8 | 721 |
| Koppal | 2 | 0 | 0 | 0 |
| Mandya | 848 | 42 | 0 | 806 |
| MYSURU | 1381 | 1048 | 32 | 365 |
| Raichur | 172 | 91 | 5 | 86 |
| Ramnagar | 564 | 0 | 0 | 564 |
| Shimoga | 27 | 22 | 0 | 5 |
| Tumakuru | 157 | 0 | 0 | 157 |
| Udupi | 3 | 3 | 0 | 0 |
| Yadgir | 14 | 14 | 0 | 0 |
| Grand Total | 7483 | 2927 | 68 | 4594 |

S.V
14/09/2023

ಸರ್ಕಾರದ ಆದೇಶ ಸಂಖ್ಯೆ: SWD/SDC/222/2023, ದಿನಾಂಕ:13-09-2023.

**ಅನುಬಂಧ-2**

**ಗುರುತಿನ ಚೀಟಿ**

**ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ ಮತ್ತು ನಿಯಮ 2013 ರ ರೀತ್ಯಾ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್**

**As per the Prohibition of Employment as Manual Scavenger and their Rehabilitation Act and Rule 2013 Identified Manual Scavenger**

ಹೆಸರು

Name---------------------

ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಭಾವಚಿತ್ರ

ಸ್ಥಳೀಯ ಪ್ರಾಧಿಕಾರದ

ಹೆಸರು:-----------------

ಎಂ.ಎಸ್. ಸಂಖ್ಯೆ

MS ID-------------------------

ಸ್ಥಳೀಯ ಪ್ರಾಧಿಕಾರದ ಅಧಿಕಾರಿಯ

ಸಹಿ ಮತ್ತು ಪದನಾಮ

## ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದ ಸದಸ್ಯರ ವಿವರ

| |
|---|
| **ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದ ಸದಸ್ಯರನ್ನು ಒಳಗೊಂಡ ಭಾವಚಿತ್ರ** |

**ಕುಟುಂಬದ ಸದಸ್ಯರ ಹೆಸರು, ವಯಸ್ಸು, ಸಂಬಂಧ ಹಾಗೂ ಇತರೆ ವಿವರಗಳು:-**

1.
2.
3.
4.

**ವಿಳಾಸ** :-

**ಮೊಬೈಲ್ ಸಂಖ್ಯೆ:-**
**ಸ್ಥಳ** :-
**ದಿನಾಂಕ** :-

ಸ್ಥಳೀಯ ಪ್ರಾಧಿಕಾರದ ಅಧಿಕಾರಿಯ
ಸಹಿ ಮತ್ತು ಪದನಾಮ